# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 05 (181) |
| ಮಾನ್ಯ ಸದಸ್ಯರ ಹೆಸರು | ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 13/09/2021 |
| ಉತ್ತರಿಸಬೇಕಾದ ಸಚಿವರು | ಮಾನ್ಯ ಆರೋಗ್ಯ & ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಪ್ರಸ್ತುತ ಬೀದರ್ ನ ಬ್ರಿಮ್ಸ್ ಮಹಾವಿದ್ಯಾಲಯ ನಿರ್ದೇಶಕರು ಪ್ರಾಧ್ಯಾಪಕರಾಗಿದ್ದಾಗ (ಸೂಕ್ಷ್ಮ ಜೀವಶಾಸ್ತ್ರ) ಅವರ ವಿರುದ್ಧ ಭ್ರಷ್ಟಾಚಾರದ ಆರೋಪ ಇರುವುದು ಸರ್ಕಾರದ ಗಮನದಲ್ಲಿದೆಯೇ; | ಬೀದರ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಇಲ್ಲಿ ಪ್ರಸ್ತುತ ನಿರ್ದೇಶಕರ ಹುದ್ದೆಯಲ್ಲಿ ಅಧಿಕ ಪ್ರಭಾರದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಡಾ\|\| ಚಂದ್ರಕಾಂತ ಚಿಲ್ಲರ್ಗಿ, ಪ್ರಾಧ್ಯಾಪಕರು ಹಾಗೂ ವಿಭಾಗದ ಮುಖ್ಯಸ್ಥರು, ಮಿಣಿಜೀವಶಾಸ್ತ್ರ ವಿಭಾಗ, ಇವರು ಈ ಹಿಂದೆ ಸದರಿ ಸಂಸ್ಥೆಯ ಪ್ರಭಾರಿ ನಿರ್ದೇಶಕರಾಗಿ ದಿನಾಂಕ:08.10.2019 ರಿಂದ 08.12.2019 ರ ವರೆಗೆ ಕರ್ತವ್ಯ ನಿರ್ವಹಿಸಿರುವ ಅವಧಿಯಲ್ಲಿ ಭ್ರಷ್ಟಾಚಾರವನ್ನು ಮಾಡಿರುವುದರಿಂದ ಸದರಿಯವರು ವಿರುದ್ಧ ಶಿಸ್ತು ಕ್ರಮ ಕೈಗೊಳ್ಳುವಂತೆ ಶ್ರೀ ಭೂಷಣ್ ಕೆ. ರೆಡ್ಡಿ, ಕಾರ್ಯದರ್ಶಿ, ಜನರ ಹಿತಾಸಕ್ತಿ ಸಂರಕ್ಷಣಾ ಹೋರಾಟ ಸಮಿತಿ, ನೌಬಾದ್ ರಸ್ತೆ, ಬೀದರ್ ಇವರು ದಿನಾಂಕ:05.10.2020 ರಂದು ಸರ್ಕಾರಕ್ಕೆ ದೂರು ಸಲ್ಲಿಸಿರುತ್ತಾರೆ. ಆದುದರಿಂದ, ಸದರಿ ದೂರಿನಲ್ಲಿ ಪ್ರಸ್ತಾಪಿಸಿರುವ ಅಂಶಗಳ ಬಗ್ಗೆ ಪರಿಶೀಲಿಸಿ ವರದಿ ನೀಡುವಂತೆ ಕೋರಲಾಗಿದೆ. ಅದರಂತೆ ಈ ಬಗ್ಗೆ ಅಪೇಕ್ಷಿತ ವರದಿ ಬಂದ ನಂತರದಲ್ಲಿ, ಪರಿಶೀಲಿಸಿ ನಿಯಮಾನುಸಾರ ಅಗತ್ಯ ಕ್ರಮ ಕೈಗೊಳ್ಳಲಾಗುವುದು. |
| (ಆ) | ಇದ್ದಲ್ಲಿ, ಅವರಿಗೆ ನಿರ್ದೇಶಕರಾಗಿ ಮುಂಬಡ್ತಿ ನೀಡಿ, ನೇಮಕ ಮಾಡಿರುವುದು ನಿಜವೇ; ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು? | ಸದರಿಯವರಿಗೆ ನಿರ್ದೇಶಕರಾಗಿ ಮುಂಬಡ್ತಿ ನೀಡಿರುವುದಿಲ್ಲ. ಆದರೆ, ಬೀದರ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯಲ್ಲಿ ಅಧಿಕ ಪ್ರಭಾರದಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಡಾ\|\| ಶಿವಕುಮಾರ್ ಸಿ.ಆರ್. ಪ್ರಾಧ್ಯಾಪಕರು ಹಾಗೂ ಜನರಲ್ ಸರ್ಜರಿ ವಿಭಾಗದ ಮುಖ್ಯಸ್ಥರು, ಕಲಬುರಗಿ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಇವರ ಸೇವೆಯನ್ನು ಕಲಬುರಗಿ ಸಂಸ್ಥೆಗೆ ಹಿಂತಿರುಗಿಸಿರುವ ಕಾರಣ ಸರ್ಕಾರದ ಅಧಿಸೂಚನೆ ಸಂಖ್ಯೆ:ಎಂಇಡಿ 203 ಎಂಎಸ್ಎಫ್ 2021 (ಭಾಗ-1), ದಿನಾಂಕ:13.07.2021 ರಲ್ಲಿ ಡಾ\|\| ಚಂದ್ರಕಾಂತ ಚಿಲ್ಲರ್ಗಿ, ಪ್ರಾಧ್ಯಾಪಕರು ಹಾಗೂ ವಿಭಾಗದ ಮುಖ್ಯಸ್ಥರು, ಮಿಣಿಜೀವಶಾಸ್ತ್ರ ವಿಭಾಗ, ಬೀದರ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಇವರನ್ನು ಆಡಳಿತಾತ್ಮಕ ಹಿತದೃಷ್ಟಿಯಿಂದ ಸದರಿ ಸಂಸ್ಥೆಯ ನಿರ್ದೇಶಕರ ಹುದ್ದೆಯ ಅಧಿಕ ಪ್ರಭಾರದಲ್ಲಿರಿಸಿ ಆದೇಶಿಸಲಾಗಿದೆ. |

**ಕಡತ ಸಂ: ಎಂಇಡಿ 342 ಎಂ.ಎಸ್.ಎಫ್. 2021**

**(ಡಾ\|\| ಕೆ. ಸುಧಾಕರ್)**
**ಆರೋಗ್ಯ & ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು.**